# ನೀರಿನ ಸಂರಕ್ಷಣೆ: ಅರಿವು ಕಾರ್ಯಕ್ರಮ

ಪ್ರಜಾವಾಣಿ ವಾರ್ತೆ

ಹಳಿಯಾಳ: ಇಲ್ಲಿನ ಕರ್ನಾಟಕ ಲಾ ಸೊಸೈಟಿ, ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ವಿದ್ಯಾಲಯ ಹಾಗೂ ಇಕೋ ಕ್ಲಬ್‌ನ ಜಂಟಿ ಸಹಯೋಗದಲ್ಲಿ ತಾಲ್ಲೂಕಿನ ಪ್ರಾಥಮಿಕ ಶಾಲಾ ಮಕ್ಕಳಿಗೆ ನೀರಿನ ಸಂರಕ್ಷಣೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಫೆ. 1ರಿಂದ ನಡೆಸಲಾಯಿತು.

ಸೋಮವಾರ ತಾಲ್ಲೂಕಿನ ಕೆಸರೊಳ್ಳಿ ಗ್ರಾಮದ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಶಾಲಾ ಮಕ್ಕಳಿಗೆ ನೀರು ಸಂರಕ್ಷಣೆಯ ಮಹತ್ವ ವಿವರಿಸಲಾಯಿತು. ದೃಶ್ಯ ಮಾಧ್ಯಮದ ಮೂಲಕ ಮಕ್ಕಳಿಗೆ ಮಳೆ ಕೊಯ್ಲು ಮತ್ತು ನೀರಿನ ಸಂರಕ್ಷಣೆಗೆ ಬಳಸಲಾಗುತ್ತಿರುವ ಆಧುನಿಕ ತಂತ್ರಜ್ಞಾನದ ಕುರಿತು ಜಾಗೃತಿ ಮೂಡಿಸಿದರು.

ಮುಖ್ಯಾಧ್ಯಾಪಕ ಕೆ.ಎನ್. ಪಾಠಣಕರ, ಬೋಧಕ-ಬೋಧಕೇತರ ಸಿಬ್ಬಂದಿ ಇದ್ದರು.



ಹಳಿಯಾಳದ ಕರ್ನಾಟಕ ಲಾ ಸೊಸೈಟಿ, ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ವಿದ್ಯಾಲಯ ಹಾಗೂ ಇಕೋ ಕ್ಲಬ್‌ನ ಜಂಟಿ ಸಹಯೋಗದಲ್ಲಿ ತಾಲ್ಲೂಕಿ ಕೆಸರೊಳ್ಳಿ ಗ್ರಾಮದ ಪ್ರಾಥಮಿಕ ಶಾಲಾ ಮಕ್ಕಳಿಗೆ ನೀರಿನ ಸಂರಕ್ಷಣೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಶಾಲಾ ಮಕ್ಕಳು

**ಗೋ ಶಾಲೆಗೆ ಭೇಟಿ:** ತಾಂತ್ರಿಕ ವಿದ್ಯಾಲಯದ ವಿದ್ಯಾರ್ಥಿಗಳು ತಾಲ್ಲೂಕಿನ ಅಜಗಾಂವ ಗ್ರಾಮದಲ್ಲಿರುವ ಶಂಕರನಾರಾಯಣ ಐತಾಳ ಅವರ ಗೋಶಾಲೆಗೆ ಭೇಟಿ ನೀಡಿ ಜೈವಿಕ ಅನಿಲ ತಯಾರಿಕೆ, ಸಾವಯವ ಕೃಷಿ, ನೀರು ಸಂರಕ್ಷಣೆಗೆ ಗೋ ಶಾಲೆಯಲ್ಲಿ ತೆಗೆದುಕೊಂಡಿರುವ ಉಪಕ್ರಮಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ ಪ್ರೊ. ಲಕ್ಷ್ಮಿ ಹಟ್ಟಿಹೋಳಿ, ಪ್ರೊ. ರಾಕೇಶ ಪಾಟೀಲ, ಪ್ರೊ ಆಶಿಕ್ ಬಳ್ಳಾರಿ ಇದ್ದರು.